ಜೆಎಸ್‌ಎಸ್ ಮಹಾವಿದ್ಯಾಪೀಠ

ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–75

## ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**9 ಮೇ 2022 * ಸೋಮವಾರ * ಸಂಜೆ 6.00**

### ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

### ಉಪನ್ಯಾಸ



**ಶ್ರೀ ಪಿ. ಶಿವರಾಜು,** ಕೆಎಎಸ್

ಹೆಚ್ಚುವರಿ ಆಯುಕ್ತರು

ಪ್ರಾದೇಶಿಕ ಆಯುಕ್ತರ ಕಛೇರಿ, ಮೈಸೂರು

**ವಿಷಯ : ಆಡಳಿತದಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ದೂರದರ್ಶಿತ್ವ**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

**ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ**

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶವಿದೇಶಗಳ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಶ್ರೀ ಪಿ. ಶಿವರಾಜುರವರ** ಜನ್ಮಸ್ಥಳ ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕು ಪೂರಿಗಾಲಿ. ಕನ್ನಡ ವಿಷಯದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪಿಎಚ್.ಡಿ ಸಂಶೋಧನೆ ಕೈಗೊಂಡಿದ್ದಾರೆ. 2010ರಲ್ಲಿ ಕರ್ನಾಟಕ ನಾಗರಿಕ ಸೇವೆಗೆ ಆಯ್ಕೆಯಾದರು. ಹಾವೇರಿ ಮತ್ತು ಸಕಲೇಶಪುರಗಳಲ್ಲಿ ಉಪವಿಭಾಗಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದರು. ಕೊಡಗು ಜಿಲ್ಲೆ ಅಪರ ಜಿಲ್ಲಾಧಿಕಾರಿಗಳಾಗಿ, ಕರ್ನಾಟಕ ಗೃಹ ಮಂಡಳಿ ಕಾರ್ಯದರ್ಶಿಗಳಾಗಿ ಮತ್ತು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಉಪ ಆಯುಕ್ತರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಮೈಸೂರು ಕಂದಾಯ ವಿಭಾಗದ ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ ಹೆಚ್ಚುವರಿ ಆಯುಕ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸಾಹಿತ್ಯದ ಬಗ್ಗೆ ಆಸಕ್ತಿಯನ್ನು ಹೊಂದಿರುವ ಶ್ರೀಯುತರು ಸಾಮಾಜಿಕ ಕಳಕಳಿಯಿಂದ ಕೆಲಸ ಮಾಡುತ್ತಿದ್ದಾರೆ.

ಇದು ಜ್ಞಾನವಾರಿಧಿ – 75ನೇ ಉಪನ್ಯಾಸ. ಕೋವಿಡ್‌ನ ಆತಂಕ ಹೋಗಿ ಪ್ರಸ್ತುತ ಎಲ್ಲ ಕಾರ್ಯಕ್ರಮಗಳು ಮುಕ್ತವಾಗಿ ನಡೆಯುತ್ತಿವೆ. ಆದ್ದರಿಂದ ಡಿಜಿಟಲ್ ಸಾಪ್ತಾಹಿಕ ಕಾರ್ಯಕ್ರಮವನ್ನು ಇಲ್ಲಿಗೆ ಸದ್ಯಕ್ಕೆ ಸ್ಥಗಿತಗೊಳಿಸಲಾಗುತ್ತಿದೆ. ಮುಂದೆ ಅಗತ್ಯ ಕಂಡುಬಂದಾಗ ಮುಂದುವರೆಸಲಾಗುತ್ತದೆ.